**All India Radio: Bangalore**
**Regional Bulletin In Kannada**
**17.05.2025 / 2.30 p.m.**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**17.05.2025 / 2.30 p.m.**
**********

ಮುಖ್ಯಾಂಶಗಳು

೧. ಈ ಬಾರಿ ಒಂದುಲಕ್ಷದ ಮೂರು ಸಾವಿರ ಕೋಟಿ ವಾಣಿಜ್ಯ ತೆರಿಗೆ ಸಂಗ್ರಹ - ಮುಖ್ಯಮಂತ್ರಿ ಸಿದ್ಧರಾಮಯ್ಯ

೨. ಅಪರೇಷನ್ ಸಿಂದೂರ ಹಿನ್ನೆಲೆ ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ತಿರಂಗಯಾತ್ರೆ

೩. ಮುಂಗಾರು ಅವಧಿಯ ಸಮಸ್ಯೆ ನಿವಾರಿಸಲು ಉತ್ತರ ಕನ್ನಡ ಜಿಲ್ಲಾ ವಿಪತ್ತು ನಿರ್ವಹಣ ಪ್ರಾಧಿಕಾರದ ಸಭೆ

೪. ಉಪಲೋಕಾಯುಕ್ತ ಬಿ.ವೀರಪ್ಪ ಮಂಡ್ಯ ಜಿಲ್ಲೆಗೆ ಇದೇ ೨೭ ರಿಂದ ೩ ದಿನಗಳ ಪ್ರವಾಸ

೫. ಐಪಿಎಲ್ ಟಿ-೨೦ ಕ್ರಿಕೆಟ್; ಬೆಂಗಳೂರಿನಲ್ಲಿಂದು ರಾಯಲ್ ಚಾಲೆಂಜರ್ಸ್ ಬೆಂಗಳೂರು-ಕೋಲ್ಕತ್ತಾ ನೈಟ್ ರೈಡರ್ಸ್ ಮುಖಾಮುಖಿ - ಬಿಗಿಭದ್ರತೆ

ಈ ಬಾರಿ ಒಂದು ಲಕ್ಷದ ಮೂರು ಸಾವಿರ ಕೋಟಿ ತೆರಿಗೆ ಸಂಗ್ರಹವಾಗಿದೆ ಎಂದು ಮುಖ್ಯಮಂತ್ರಿ ಸಿದ್ಧರಾಮಯ್ಯ ತಿಳಿಸಿದ್ದಾರೆ. ಕರ್ನಾಟಕ ವಾಣಿಜ್ಯ ತೆರಿಗೆಗಳ ಸೇವಾ ಸಂಘ ಬೆಂಗಳೂರಿನಲ್ಲಿ ಆಯೋಜಿಸಿದ್ದ ಸುವರ್ಣ ಮಹೋತ್ಸವ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು ಈ ಬಾರಿ ೧ ಲಕ್ಷದ ೨೦ ಸಾವಿರ ಕೋಟಿ ತೆರಿಗೆ ಸಂಗ್ರಹ ಗುರಿ ನಿಗದಿ ಪಡಿಸಲಾಗಿತ್ತು. ಆದರೂ ತೆರಿಗೆ ಸಂಗ್ರಹಕ್ಕೆ ಕಾರಣರಾದ ಎಲ್ಲಾ ಅಧಿಕಾರಿಗಳಿಗೆ ಅಭಿನಂದನೆ ಸಲ್ಲಿಸುವುದಾಗಿ ತಿಳಿಸಿದ್ದಾರೆ. ಜವಾಬ್ದಾರಿ ಇರೋ ಅಧಿಕಾರಿಗಳಿಂದ ಹೆಚ್ಚು ತೆರಿಗೆ ಸಂಗ್ರಹವಾಗುತ್ತಿದ್ದು, ಕಳೆದ ವರ್ಷ ೧ ಲಕ್ಷ ೩ ಸಾವಿರ ಕೋಟಿ ಸಂಗ್ರಹ ಆಗಿತ್ತು ಎಂದು ಹೇಳಿದರು. ಇದೇ ವೇಳೆ ಗ್ಯಾರಂಟಿ ಯೋಜನೆಗಳಿಗೆ ೯೦ ಸಾವಿರ ಕೋಟಿ ಖರ್ಚು ಮಾಡಲಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ.

********

ಆಪರೇಷನ್ ಸಿಂಧೂರಿ ಯಶಸ್ಸಿನ ಹಿನ್ನಲೆಯಲ್ಲಿ ಭಾರತದ ಸೈನಿಕರಿಗೆ ಗೌರವ ನಮನ ಸಲ್ಲಿಸಲು ಚಿತ್ರದುರ್ಗದ ವಿವಿಧ ಸಂಘಟನೆಗಳ ಸಂಯುಕ್ತ ಆಶ್ರಯದಲ್ಲಿ ತಿರಂಗಾ ಯಾತ್ರೆ ಹಮ್ಮಿಕೊಳ್ಳಲಾಗಿತ್ತು.

ಒಂದು ಕಿಲೋಮೀಟರ್ ಉದ್ದದ ಭಾರತದ ಬಾವುಟವನ್ನು ಹಿಡಿದು ನಗರದ ಸಂಗೊಳ್ಳಿ ರಾಯಣ್ಣ ವೃತ್ತದಿಂದ ಆರಂಭವಾದ ತಿರಂಗಾಯಾತ್ರೆಯು ಓಬವ್ವ ವೃತದಲ್ಲಿ ಬಹಿರಂಗ ಸಭೆಯಲ್ಲಿ ಅಂತ್ಯವಾಯ್ತು.

********

ಪಾಕಿಸ್ತಾನದ ವಿರುದ್ಧ ಭಾರತ ನಡೆಸಿದ 'ಆಪರೇಷನ್ ಸಿಂದೂರ' ಸೈನಿಕ ಕಾರ್ಯಾಚರಣೆ ಯಶಸ್ವಿಯಾಗಿರುವ ಹಿನ್ನೆಲೆಯಲ್ಲಿ ಸಿಂದೂರ ವಿಜಯೋತ್ಸವ ಸಮಿತಿ ಮಂಗಳೂರು ವತಿಯಿಂದ ಇದೇ ೨೦ರಂದು ಮಂಗಳೂರಿನಲ್ಲಿ ಬೃಹತ್ ತಿರಂಗಾ ಜಾಥಾ ಆಯೋಜಿಸಲಾಗಿದೆ ಎಂದು ಸಮಿತಿಯ ಸಂಚಾಲಕ ಕೇಶವ ನಂದೋಡಿ ತಿಳಿಸಿದ್ದಾರೆ.

**********

ಸೇನಾ ಪಡೆಗಳ ಪರಾಕ್ರಮವನ್ನು ಸ್ಮರಿಸಿ ಹಾಗೂ ಉಗ್ರವಾದವನ್ನು ಖಂಡಿಸಿ, ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರದಲ್ಲಿ ಆರ್.ಎಲ್.ಜಾಲಪ್ಪ ಸಮೂಹ ಶಿಕ್ಷಣ ಸಂಸ್ಥೆಗಳ ನೇತೃತ್ವದಲ್ಲಿ ಬೃಹತ್ ವಿದ್ಯಾರ್ಥಿಗಳ ತಿರಂಗ ಜಾಥಾ ಹಾಗೂ ಯೋಧ ನಮನ ಕಾರ್ಯಕ್ರಮ ನಡೆಯಿತು.ಸಾವಿರಾರು ವಿದ್ಯಾರ್ಥಿಗಳು ರಾಷ್ಟ್ರ ಧ್ವಜಗಳನ್ನು ಹಿಡಿದು ಹಾಗೂ ೫೦೦ ಅಡಿ ಉದ್ದದ ತ್ರಿವರ್ಣ ಧ್ವಜದೊಂದಿಗೆ ನಗರದ ಪ್ರಮುಖ ಬೀದಿಗಳಲ್ಲಿ ಮೆರವಣಿಗೆ ನಡೆಸಿದರು.ನಂತರ ನಿವೃತ್ತ ಸೇನಾನಿಗಳಿಗೆ ಅಭಿನಂದನೆ ಸಲ್ಲಿಸಲಾಯಿತು.

**********

ಪ್ರಸಕ್ತ ಸಾಲಿನ ಮುಂಗಾರು ಅವಧಿಯಲ್ಲಿ ಜಿಲ್ಲೆಯಲ್ಲಿ ಉಂಟಾಗಬಹುದಾದ ಯಾವುದೇ ರೀತಿಯ ಸಮಸ್ಯೆಗಳನ್ನು ಎದುರಿಸಲು ಎಲ್ಲಾ ಅಧಿಕಾರಿಗಳು ಮತ್ತು ಸಿಬ್ಬಂದಿಗಳು ಸನ್ನದ್ದರಾಗಿರುವಂತೆ

ಹಾಗೂ ಎಲ್ಲಾ ತಾಲೂಕುಗಳಲ್ಲಿ ಕಂಟ್ರೋಲ್ ರೂಂ ಗಳನ್ನು ತೆರೆಯುವಂತೆ ಉತ್ತರಕನ್ನಡ ಜಿಲ್ಲಾಧಿಕಾರಿ ಕೆ.ಲಕ್ಷ್ಮಿಪ್ರಿಯ ನಿರ್ದೇಶನ ನೀಡಿದರು.ಅವರು ಕಾರವಾರದಲ್ಲಿ ಜಿಲ್ಲೆಯಲ್ಲಿ ಪ್ರಸಕ್ತ ಸಾಲಿನ ಮುಂಗಾರು ಸಿದ್ಧತಾ ಕ್ರಮಗಳ ಕುರಿತು ನಡೆದ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಸಭೆಯ ಅಧ್ಯಕ್ಷತೆ ವಹಿಸಿ ಮಾತಾನಾಡುತ್ತಾ ಮಳೆಗಾಲದಲ್ಲಿ ಸಾರ್ವಜನಿಕರ ಸಮಸ್ಯೆಗಳಿಗೆ ತಕ್ಷಣ ಸ್ಪಂದಿಸಲು ಅನುಕೂಲವಾಗುವಂತೆ ಎಲ್ಲಾ ತಹಸೀಲ್ದಾರ್ ಕಚೇರಿಗಳಲ್ಲಿ ಮತ್ತು ನಗರ ಸ್ಥಳೀಯ ಸಂಸ್ಥೆಗಳ ಕಚೇರಿಗಳಲ್ಲಿ ೨೪*೭ ಕಾರ್ಯನಿರ್ವಹಿಸುವ ಕಂಟ್ರೋಲ್ ರೂಂ ತೆರೆಯುವಂತೆ ಸೂಚಿಸಿದ ಜಿಲ್ಲಾಧಿಕಾರಿಗಳು, ಜಿಲ್ಲಾಧಿಕಾರಿ ಕಚೇರಿಯಲ್ಲಿನ ಜಿಲ್ಲಾ ತುರ್ತು ಕಾರ್ಯಚರಣೆ ಕೇಂದ್ರದಲ್ಲಿ ಪೊಲೀಸ್, ಅಗ್ನಿಶಾಮಕ, ಅರಣ್ಯ, ಹೆಸ್ಕಾಂ, ಬಿ.ಎಸ್.ಎನ್.ಎಲ್ ಕಚೇರಿಯ ಸಿಬ್ಬಂದಿಗಳನ್ನು ಕರ್ತವ್ಯಕ್ಕೆ ನಿಯೋಜಿಸುವಂತೆ ತಿಳಿಸಿದರು. ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಸಾಜಿದ್ ಮುಲ್ಲಾ, ಉಪ ವಿಭಾಗಾಧಿಕಾರಿ ಕನಿಷ್ಕ, ಉಪ ಅರಣ್ಯ ಸಂರಕ್ಷಣಾಧಿಕಾರಿ ರವಿಶಂಕರ್ ಹಾಗೂ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

**********

ಪಹಲ್ಗಾಮ್ ನಲ್ಲಿ ಪಾಕಿಸ್ತಾನ ಭಯೋತ್ಪಾದಕರ ಉಗ್ರರು, ಅಮಾಯಕ ಭಾರತೀಯ ಪ್ರಜೆಗಳ ಮೇಲೆ ಗುಂಡಿನ ದಾಳಿಯನ್ನು ನಡೆಸಿ, ಜೀವಗಳನ್ನು ಬಲಿ ತೆಗೆದುಕೊಂಡಿದ್ದು, ಇದಕ್ಕೆ ಪ್ರತ್ಯುತ್ತರವಾಗಿ ಭಾರತೀಯ ಸೇನೆ ತಕ್ಕ ಪಾಠವನ್ನು ಉಗ್ರರಿಗೆ ಕಲಿಸಿದ್ದು, ವಿಶ್ವವೇ ಭಾರತೀಯ ಸೇನೆಯನ್ನು ಶ್ಲಾಘಿಸಿದೆ ಎಂದು ಕೋಲಾರ ಬಿಜೆಪಿ ಜಿಲ್ಲಾಧ್ಯಕ್ಷ ಓಂಶಕ್ತಿ ಚಲಪತಿ ಎಂದರು.ಸುದ್ದಿಗಾರೊಂದಿಗೆ ಮಾತನಾಡಿದ ಅವರು, ದೇಶ ಹಾಗೂ ದೇಶದ ಸೈನಿಕರ ಬಗ್ಗೆ ಹಗುರವಾಗಿ ಮಾತನಾಡಿರುವ ಕೋಲಾರ ಶಾಸಕ ಕೊತ್ತೂರು ಮಂಜುನಾಥ್ ಹೇಳಿಕೆ ಖಂಡನೀಯ ಎಂದು ಅಸಮಾಧಾನ ವ್ಯಕ್ತಪಡಿಸಿದರು. ಜಿಲ್ಲೆಯ ಕೋಲಾರ ವಿಧಾನಸಭಾ ಕ್ಷೇತ್ರದಲ್ಲಿ ಸುಮಾರು ೮೦ ಸಾವಿರ ಮತಗಳಿಂದ ಆಯ್ಕೆಗೊಂಡಿದ್ದಾರೆ. ದೇಶದ ೧೪೦ ಕೋಟಿ ಜನ ಭಾರತದ ಸೈನಿಕರ ಕಾರ್ಯವನ್ನು ವಿಶ್ವದಲ್ಲಿ ಭಾರತೀಯ ಸೈನ್ಯದ ಕಾರ್ಯವನ್ನು ಶ್ಲಾಘಿಸಿದ್ದಾರೆ.

********

ಕಳೆದ ಮೇ ೫ ರಂದು ಆರಂಭವಾಗಿರುವ ಪರಿಶಿಷ್ಟ ಜಾತಿ ಒಳ ಮೀಸಲಾತಿ ಸಮೀಕ್ಷೆ ಪರಿಶೀಲನೆಗಾಗಿ ಯಾದಗಿರಿ ಜಿಲ್ಲಾಧಿಕಾರಿ ಡಾ. ಬಿ. ಸುಶೀಲಾ ಅವರು ಯಾದಗಿರಿ ನಗರದ ಗಾಂಧಿ ನಗರ ತಾಂಡಾ, ಅಂಬೇಡ್ಕರ್ ನಗರ, ಕೋಟಗೇರಾ ವಾಡಾಕ್ಕೆ ಭೇಟಿ ನೀಡಿದರು. ಕಳೆದ ೧೫ ದಿನಗಳಿಂದ ಯಾದಗಿರಿ ಜಿಲ್ಲೆಯಲ್ಲಿ ನಡೆದಿರುವ ಈ ಸಮೀಕ್ಷೆ ಬಗ್ಗೆ ಸಂಬಂಧಪಟ್ಟ ಅಧಿಕಾರಿಗಳ ಮೂಲಕ ಮಾಹಿತಿ ಪಡೆಯುತ್ತಿರುವ ಜಿಲ್ಲಾಧಿಕಾರಿ ಅವರು ಸಮೀಕ್ಷಾ ಸ್ಥಳಕ್ಕೆ ತಾವೇ ಖುದ್ದು ಭೇಟಿ ನೀಡುವ ಮೂಲಕ ಸಮೀಕ್ಷೆಯಲ್ಲಿರುವ ಸಿಬ್ಬಂದಿ ಮತ್ತು ಜನರಿಗೆ ಅಗತ್ಯ ಹೆಚ್ಚಿನ ಮಾಹಿತಿ ನೀಡಿದರು. ಈ ವೇಳೆ ಗಾಂಧಿ ನಗರದಲ್ಲಿ ಸಮೀಕ್ಷೆ ನಡೆಸುತ್ತಿರುವ ಬಗ್ಗೆ ದಾಖಲೆ ಪರಿಶೀಲಿಸಿದರು. ಈ ವೇಳೆ ಸಮಾಜ ಕಲ್ಯಾಣ ಇಲಾಖೆ ಉಪ ನಿರ್ದೇಶಕ ಚನ್ನಬಸಪ್ಪ, ತಹಶೀಲ್ದಾರ್ ಸುರೇಶ್ ಅಂಕಲಗಿ ಉಪಸ್ಥಿತರಿದ್ದರು.

**********

ಯಾದಗಿರಿ ನಗರದ ವಿವಿಧೆಡೆ ೧೦.೬೦ಕೋಟಿ ರೂಪಾಯಿ ವೆಚ್ಚದಲ್ಲಿ ಪ್ರಗತಿಯಲ್ಲಿರುವ ರಸ್ತೆ ಅಭಿವೃದ್ಧಿ, ರಸ್ತೆ ವಿಭಜಕ ನಿರ್ಮಾಣ ಮತ್ತು ರಾಜಕಾಲುವೆ ಕಾಮಗಾರಿಯನ್ನು ಯಾದಗಿರಿ ಮತಕ್ಷೇತ್ರದ ಶಾಸಕ ಚನ್ನಾರೆಡ್ಡಿ ಪಾಟೀಲ್ ತುನ್ನೂರು ವೀಕ್ಷಿಸಿದರು. ಯಾದಗಿರಿ ನಗರದ ಗಂಜ್ ವೃತ್ತ, ಮಹಾತ್ಮ ಗಾಂಧಿ ವೃತ್ತ, ಹತ್ತಿಕುಣಿ ರಸ್ತೆ, ಬಾಲಾಜಿ ದೇವಸ್ಥಾನ ರಸ್ತೆ ಅಭಿವೃದ್ಧಿ ಮತ್ತು ರಸ್ತೆ ವಿಭಜಕ ಕಾಮಗಾರಿ ವೀಕ್ಷಿಸಿದ ಶಾಸಕರು ನಿಗದಿತ ಕಾಲಾವಕಾಶದಲ್ಲಿ ಗುಣಮಟ್ಟದ ಕಾಮಗಾರಿ ಆಗಬೇಕು. ಗುಣಮಟ್ಟದಲ್ಲಿ ಯಾವುದೇ ರಾಜೀ ಇಲ್ಲ. ಕಳಪೆ ಆಗಿರುವ ಕುರಿತು ದೂರು ಬಂದಲ್ಲಿ ನಿರ್ದಾಕ್ಷಿಣ್ಯವಾಗಿ ಕ್ರಮ ಕೈಗೊಳ್ಳಲಾಗುವುದು ಎಂದು ಭೂಸೇನಾ ನಿಗಮದ ಅಧಿಕಾರಿಗಳಿಗೆ ತಾಕೀತು ಮಾಡಿದರು. ಸುದ್ದಿಗಾರರ ಜತೆ ಮಾತನಾಡಿದ ಯಾದಗಿರಿ ಮತಕ್ಷೇತ್ರದ ಶಾಸಕ ಚನ್ನಾರೆಡ್ಡಿ ಪಾಟೀಲ್ ತುನ್ನೂರು, ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿ (ಕೆಕೆಆರ್‌ಡಿಬಿ) ಯೋಜನೆಯಡಿ ೧೦.೬೦ ಕೋಟಿ ರೂಪಾಯಿ ವೆಚ್ಚದಲ್ಲಿ ನಗರ ಪ್ರಮುಖ ರಸ್ತೆಗಳ ಅಭಿವೃದ್ಧಿ, ರಸ್ತೆ ವಿಭಜಕ ಹಾಗೂ ಚರಂಡಿ ನಿರ್ಮಾಣ ಕೆಲಸ ಕೈಗೆತ್ತಿಕೊಳ್ಳಲಾಗಿದೆ. ಮುಂದಿನ ದಿನಗಳಲ್ಲಿ ಸುಂದರ ನಗರ ಮಾಡುವುದು ನನ್ನ ಸಂಕಲ್ಪವಾಗಿದೆ. ಹೀಗಾಗಿ ಕೆಕೆಆರ್‌ಡಿಬಿ ಮೈಕ್ರೊ, ಸಿಎಂಡಿಕ್ಯೂ ಯೊಜನೆಯಡಿ ಅಭಿವೃದ್ಧಿ ಕೆಲಸಗಳಿಗೆ ಚಾಲನೆ ನೀಡಲಾಗಿದೆ ಎಂದರು.

**********

ನ್ಯಾಯಮೂರ್ತಿ ಹಾಗೂ ಉಪ ಲೋಕಾಯುಕ್ತರಾದ ಬಿ.ವೀರಪ್ಪ ಅವರು ಇದೇ ಮೇ ೧೭, ೧೮, ೧೯ರಂದು ಮೂರು ದಿನಗಳ ಕಾಲ ಮಂಡ್ಯ ಜಿಲ್ಲಾ ಪ್ರವಾಸ ಕೈಗೊಂಡಿದ್ದು, ಸಾರ್ವಜನಿಕರ ಕುಂದು ಕೊರತೆ ಮತ್ತು ಸಮಸ್ಯೆಗಳನ್ನು ವಿಚಾರಿಸಲಿದ್ದಾರೆ ಎಂದು ಜಿಲ್ಲಾಧಿಕಾರಿ ಡಾ.ಕುಮಾರ ತಿಳಿಸಿದ್ದಾರೆ. ಆಕಾಶವಾಣಿಯೊಂದಿಗೆ ಮಾತನಾಡಿದ ಅವರು, ೧೭ರಂದು ಮಂಡ್ಯ ಜಿಲ್ಲೆಯ ವಿವಿಧ ಸ್ಥಳಗಳಿಗೆ ಭೇಟಿ ಕೊಡಲಿದ್ದು, ೧೮ ರಂದು ಸಾರ್ವಜನಿಕರ ಕುಂದು ಕೊರತೆಗಳನ್ನು ಆಲಿಸಲಿದ್ದು, ಅಹವಾಲು ಸ್ವೀಕರಿಸಲಿದ್ದಾರೆ. ಈ ಕಾರ್ಯಕ್ರಮ ಮಂಡ್ಯ ನಗರದ ಜಿಲ್ಲಾಧಿಕಾರಿ ಕಚೇರಿಯಲ್ಲಿ ನಡೆಯಲಿದ್ದು, ಈ ಕಾರ್ಯಕ್ರಮದ ಸದುಪಯೋಗ ಪಡೆದುಕೊಳ್ಳುವಂತೆ ಜಿಲ್ಲಾಧಿಕಾರಿಗಳು ಮನವಿ ಮಾಡಿದ್ದಾರೆ.

**********

ಪಾಕಿಸ್ತಾನದ ಮೇಲೆ ಭಾರತ ನಡೆಸಿದ ಧಾಳಿಯನ್ನು ಒಪ್ಪಿಕೊಳ್ಳದ ಕಾಂಗ್ರೆಸ್ ನಾಯಕರ ವಿರುದ್ಧ ನಗರದಲ್ಲಿ ವಿಧಾನ ಪರಿಷತ್ ವಿ ಪಕ್ಷದ ನಾಯಕರಾದ ಛಲವಾದಿ ನಾರಾಯಣ ಸ್ವಾಮಿ ತೀವ್ರ ವಾಗ್ದಾಳಿ ನಡೆಸಿದ್ದಾರೆ. ಹಾಸನದಲ್ಲಿ ಇಂದು ಈ ಬಗ್ಗೆ ಮಾತನಾಡಿದ ಅವರು, ಉಗ್ರರು ಭಾರತೀಯ ಹೆಣ್ಣುಮಕ್ಕಳ ಅರಿಶಿನ ಕುಂಕುಮ ಅಳಿಸುವ ಕೆಲಸ ಮಾಡಿದ್ದಾರೆ, ಭಾರತೀಯರ ಮೇಲೆ ನಡೆದ ಅಟ್ಟಹಾಸಕ್ಕೆ ಭಾರತ ದಿಟ್ಟ ಉತ್ತರ ನೀಡುವ ಸಲುವಾಗಿ ಪಾಕಿಸ್ತಾನದ ಮೇಲೆ ಧಾಳಿ ನಡೆದು ಯಶಸ್ವಿಯಾಗಿ ಉಗ್ರರ ನೆಲೆ ಧ್ವಂಸ ಮಾಡಿದೆ ಎಂದರು.

**********

ಭಾರತ ಮತ್ತು ಪಾಕಿಸ್ತಾನ ನಡುವಿನ ಸಂಘರ್ಷದಿಂದ ೧ ವಾರಗಳ ಕಾಲ ಸ್ಥಗಿತಗೊಂಡಿದ್ದ ೧೮ನೇ ಆವೃತ್ತಿಯ ಐಪಿಎಲ್ ಕ್ರಿಕೆಟ್ ಪಂದ್ಯ ಇಂದಿನಿಂದ ಪುನರಾರಂಭವಾಗುತ್ತಿದೆ. ಬೆಂಗಳೂರು ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿಂದು  ರಾಯಲ್ ಚಾಲೆಂಜರ್ಸ್ ಬೆಂಗಳೂರು ಮತ್ತು ಕೊಲ್ಕೊತ್ತಾ ನೈಟ್ ರೈಡರ್ಸ್ ತಂಡಗಳು ಸೆಣಸಾಟ ನಡೆಸಲಿವೆ. ಪಂದ್ಯ ಸಂಜೆ ೭.೩೦ ಕ್ಕೆ ಆರಂಭವಾಗಲಿದೆ. ಈ ಬಾರಿ ಐಪಿಎಲ್ ಪಂದ್ಯಾವಳಿಗೆ ಹೆಚ್ಚಿನ ಭದ್ರತೆ ಒದಗಿಸಲಾಗುತ್ತಿದೆ. ಚಿನ್ನಸ್ವಾಮಿ ಕ್ರೀಡಾಂಗಣ

ಸುತ್ತಮುತ್ತ ಭದ್ರತೆ ಪರಿಶೀಲನೆ ನಡೆಸಲಾಗಿದೆ. ಬಾಂಬ್ ನಿಷ್ಕ್ರಿಯ ದಳ ಮತ್ತು ಶ್ವಾನದಳದಿಂದ ಪರಿಶೀಲನೆ ನಡೆಸಲಾಗಿದೆ.

**********

ಭಾರತೀಯ ಸೈನಿಕರ ಧೈರ್ಯ, ಸ್ಥೈರ್ಯ ಕಾರ್ಯಕ್ಷಮತೆ ಬಗ್ಗೆ ಅಭಿಮಾನದ ಮಹಾಪೂರವೇ ಹರಿದು ಬರುತ್ತಿದ್ದು, ಸೈನಿಕರ ಪರಾಕ್ರಮದ ಬಗ್ಗೆ, ಗಣ್ಯರು ಹಾಗೂ ಮಾಜಿ ಸೈನಿಕರು, ಬೆಂಬಲಿಸುವ ನುಡಿಗಳನ್ನಾಡುತ್ತಿದ್ದಾರೆ. ಈ ದಿಸೆಯಲ್ಲಿ ಮಾಜಿ ಸೈನಿಕ ದೊಡ್ಡಬಳ್ಳಾಪುರದ ವಿಜಯೇಂದ್ರ ರಾವ್ ಆಕಾಶವಾಣಿಯೊಂದಿಗೆ ತಮ್ಮ ಅನಿಸಿಕೆ ಹಂಚಿಕೊಂಡಿದ್ದಾರೆ.

ಬೈಟ್ : ಮಾಜಿ ಸೈನಿಕ ವಿಜಯೇಂದ್ರ ರಾವ್

---

ಕಾಶ್ಮೀರ ಸಮಸ್ಯೆಯನ್ನು ಅಂತರ ರಾಷ್ಟ್ರೀಕರಣಗೊಳಿಸಲು ಪಾಕಿಸ್ತಾನದ ಪ್ರಯತ್ನಗಳಿಗೆ ಮತ್ತು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ಇತ್ತೀಚಿನ ಹೇಳಿಕೆಗಳಿಗೆ ಪ್ರತಿಕ್ರಿಯೆಯಾಗಿ ನಿಯೋಗಗಳನ್ನು ಕಳುಹಿಸುವ ನಿರ್ಧಾರವನ್ನು ತೆಗೆದುಕೊಳ್ಳಲಾಗಿದೆ ಎಂದು ಮೂಲಗಳು ಸೂಚಿಸಿವೆ.

ಈ ನಡುವೆ, ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು, ಏಳು ಸರ್ವಪಕ್ಷ ನಿಯೋಗಗಳು ಭಯೋತ್ಪಾದನೆಗೆ ಶೂನ್ಯ ಸಹಿಷ್ಣುತೆಯ ಭಾರತದ ಸಂದೇಶವನ್ನು ಕೊಂಡೊಯ್ಯಲಿವೆ, ಇದು ಭಿನ್ನಾಭಿಪ್ರಾಯಗಳು ,ರಾಜಕೀಯವನ್ನು ಮೀರಿ ರಾಷ್ಟ್ರೀಯ ಏಕತೆಯ ಪ್ರಬಲ ಪ್ರತಿಬಿಂಬವಾಗಿ ನಿಂತಿದೆ. ಅತ್ಯಂತ ಮುಖ್ಯವಾದ ಕ್ಷಣಗಳಲ್ಲಿ, ಭಾರತವು ಒಗ್ಗಟ್ಟಿನಿಂದ ನಿಂತಿದೆ ಎಂದು ಅವರು ಹೇಳಿದ್ದಾರೆ.

**********

ಚಿಕ್ಕಮಗಳೂರು ಜಿಲ್ಲೆಯಲ್ಲಿ ಪ್ರವಾಸೋದ್ಯಮಕ್ಕೆ ವಿಪುಲ ಅವಕಾಶಗಳಿದ್ದು, ಪ್ರವಾಸಿ ತಾಣಗಳನ್ನು ಅಭಿವೃದ್ಧಿಪಡಿಸುವಂತೆ ಕರ್ನಾಟಕ ವಿಧಾನ ಪರಿಷತ್ತಿನ ಉಪಸಭಾಪತಿಗಳು ಹಾಗೂ ವಿಧಾನ ಪರಿಷತ್ ಅರ್ಜಿ ಸಮಿತಿ ಅಧ್ಯಕ್ಷರೂ ಆದ ಎಂ.ಕೆ.ಪ್ರಾಣೇಶ್ ತಿಳಿಸಿದ್ದಾರೆ. ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜಿಲ್ಲೆಯ ಪ್ರವಾಸೋದ್ಯಮ ಅಭಿವೃದ್ಧಿ ಹಾಗೂ ಪ್ರಕರಣಗಳನ್ನು

ಪರಿಶೀಲಿಸಿ ಮಾತನಾಡಿದ ಅವರು, ಚಿಕ್ಕಮಗಳೂರು ಜಿಲ್ಲೆಯಲ್ಲಿ ಪ್ರವಾಸಿಗರನ್ನು ಆಕರ್ಷಿಸಲು ಪ್ರವಾಸಿ ತಾಣಗಳನ್ನು ಗುರುತಿಸಿ ಅಭಿವೃದ್ಧಿಪಡಿಸಲು ಅಗತ್ಯ ಕ್ರಿಯಾಯೋಜನೆ ರೂಪಿಸಿ ಸಮಿತಿಗೆ ಸಲ್ಲಿಸುವಂತೆ ಅಧಿಕಾರಿಗಳಿಗೆ ತಿಳಿಸಿದ ಅವರು, ಇದನ್ನು ಸರ್ಕಾರಕ್ಕೆ ಸಮಿತಿಯಿಂದ ಶಿಫಾರಸ್ಸು ಮಾಡಲಾಗುವುದು ಎಂದರು.

**********

"ಪಕ್ಷದ ಮುಖಂಡರ ಒತ್ತಾಯದ ಮೇರೆಗೆ ಬೆಂಗಳೂರು ಹಾಲು ಒಕ್ಕೂಟದ ಕನಕಪುರ ನಿರ್ದೇಶಕ ಸ್ಥಾನಕ್ಕೆ ಸ್ಪರ್ಧಿಸುವುದಾಗಿ ಎಂದು ಮಾಜಿ ಸಂಸದ ಡಿ.ಕೆ.ಸುರೇಶ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು ಪಕ್ಷದ ಕಾರ್ಯಕರ್ತನಾಗಿ ಪಕ್ಷದ ಹಿರಿಯ ನಾಯಕರಿಗೆ ತಲೆಬಾಗಬೇಕು ಎಂದು ಹೇಳಿದ್ದಾರೆ. ಇಂದು ಬೆಂಗಳೂರಿನಲ್ಲಿ ನಾಮಪತ್ರ ಸಲ್ಲಿಸಲಿದ್ದಾರೆ.

**********

ಕರ್ನಾಟಕ ಸೇರಿದಂತೆ ದೇಶದ ದಕ್ಷಿಣ ರಾಜ್ಯಗಳಲ್ಲಿ ಇಂದು ಭಾರೀ ಮಳೆಯಾಗುವ ಸಾಧ್ಯತೆ ಇದೆ. ಕರ್ನಾಟಕದ ಒಳನಾಡು, ಕರಾವಳಿ ಜಿಲ್ಲೆಗಳಾದ ದಕ್ಷಿಣ ಕನ್ನಡ ಉಡುಪಿ, ಉತ್ತರ ಕನ್ನಡ ಜಿಲ್ಲೆಗಳಲ್ಲಿ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ರಾಜಧಾನಿ ಬೆಂಗಳೂರಿನಲ್ಲೂ ಇಂದು ಮಳೆಯಾಗುವ ಸಾಧ್ಯತೆ ಇದೆ ಎಂದು ಹವಮಾನ ಇಲಾಖೆ ತಿಳಿಸಿದೆ.

**********